# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: ನಿವೃತ್ತಿ ವೇತನ ಪಡೆಯಲು ಇರುವ ಕನಿಷ್ಠ ಅರ್ಹತಾದಾಯಕ ಸೇವೆಯ ಪರಿಷ್ಕರಣೆ ಹಾಗೂ ಪಿಂಚಣಿ ಸೌಲಭ್ಯಗಳನ್ನು ಲೆಕ್ಕ ಹಾಕಲು ಜಾರಿಯಿರುವ ಉಪಲಬ್ದಿ ಪರಿಷ್ಕರಣೆ.

**ಓದದಾಗಿದೆ**: (1) ದಿನಾಂಕ:30.09.2003 ರ ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 06 ಸನಿತಿ 2003.
(2) ದಿನಾಂಕ:08.09.2006 ರ ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 06 ಸನಿತಿ 2003.
(3) ದಿನಾಂಕ:06.06.2007 ರ ಸರ್ಕಾರಿ ಆದೇಶ ಸಂಖ್ಯೆ:ಆಇ (ವಿಶೇಷ) 03 ಪಿಎನ್ 2001(1).

**ಪ್ರಸ್ತಾವನೆ:**

ಮೇಲೆ ಕ್ರ.ಸಂ. (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ, ಬರ ಪರಿಹಾರ ಕಾರ್ಯಗಳಿಗೆ ಹಣ ಒದಗಿಸುವ ಉದ್ದೇಶದೊಂದಿಗೆ ಆಡಳಿತಾತ್ಮಕ ವೆಚ್ಚಗಳನ್ನು ಕಡಿತಗೊಳಿಸಿ, ಸಂಪನ್ಮೂಲ ಕ್ರೋಢೀಕರಿಸುವ ಉದ್ದೇಶದಿಂದ ಸರ್ಕಾರವು ಹಲವಾರು ಮಿತವ್ಯಯ ಕಾರ್ಯಕ್ರಮಗಳನ್ನು ಜಾರಿಗೊಳಿಸಿದ್ದು, ಅವುಗಳಲ್ಲಿ ಸರ್ಕಾರಿ ನೌಕರರಿಗೆ ಸಂಬಂಧಿಸಿದ ಪಿಂಚಣಿ ಸುಧಾರಣೆಗಳು ಸೇರಿದ್ದವು. ಈ ಸುಧಾರಣೆಗಳಲ್ಲಿ ನಿವೃತ್ತಿ ವೇತನವನ್ನು ಪಡೆಯಲು ಇರುವ ಕನಿಷ್ಠ ಅರ್ಹತಾದಾಯಕ ಸೇವೆಯನ್ನು 10 ವರ್ಷಗಳ ಬದಲಿಗೆ 15 ವರ್ಷಗಳಿಗೆ ಪರಿಷ್ಕರಿಸಿ ಮತ್ತು ವಿವಿಧ ನಿವೃತ್ತಿ ಮತ್ತು ಮರಣ ಸೌಲಭ್ಯಗಳು ಮತ್ತು ಕುಟುಂಬ ಪಿಂಚಣಿಗಳನ್ನು ಲೆಕ್ಕ ಹಾಕುವುದಕ್ಕಾಗಿ, ಸರ್ಕಾರಿ ನೌಕರನು ತನ್ನ ನಿವೃತ್ತಿ ಸಮಯದಲ್ಲಿ ಪಡೆಯುತ್ತಿದ್ದ ಮೂಲ ವೇತನವನ್ನು ಉಪಲಬ್ದಿಯೆಂದು ಪರಿಗಣಿಸುವ ಬದಲಿಗೆ ಆತನು ಸರ್ಕಾರಿ ಸೇವೆಯಲ್ಲಿ ಇದ್ದ ನಿಕಟ ಪೂರ್ವದ 10 ತಿಂಗಳ ಅವಧಿಯಲ್ಲಿ ಗಳಿಸಿದ ಮೂಲ ವೇತನದ ಸರಾಸರಿ ಮೊಬಲಗನ್ನು ಉಪಲಬ್ದಿಯಾಗಿ ಪರಿಗಣಿಸಬೇಕು ಎಂದು ಆದೇಶಿಸಲಾಗಿತ್ತು.

ನಂತರ, ಸರ್ಕಾರವು ಮೇಲೆ ಕ್ರ.ಸಂ. (2) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ವಯೋ ನಿವೃತ್ತಿ ವೇತನವನ್ನು ಪಡೆಯಲು ಅಗತ್ಯ ಇರುವ ಕನಿಷ್ಠ ಅರ್ಹತಾದಾಯಕ ಸೇವೆಯನ್ನು 15 ವರ್ಷಗಳಿಗೆ ಹೆಚ್ಚಿಸಿ ನಿಗದಿಪಡಿಸಿರುವುದನ್ನು ಪರಿಷ್ಕರಿಸಿ 10 ವರ್ಷಗಳ ಅರ್ಹತಾದಾಯಕ ಸೇವೆಯೆಂದು ನಿಗದಿಗೊಳಿಸಿ ಭವಿಷ್ಯಾನ್ವಯವಾಗಿ ಜಾರಿಗೊಳಿಸಿದೆ. ರಾಜ್ಯ 5ನೇ ವೇತನ ಆಯೋಗವು

ನೀಡಿದ ವರದಿಯಲ್ಲಿ ನಿವೃತ್ತಿ ಸೌಲಭ್ಯಗಳ ಬಗ್ಗೆ ಮಾಡಲಾಗಿರುವ ಶಿಫಾರಸ್ಸುಗಳನ್ನು ಪರಿಗಣಿಸಿ ಸರ್ಕಾರವು ಮೇಲೆ ಕ್ರ.ಸಂ. (3) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ನಿವೃತ್ತಿ ಸೌಲಭ್ಯಗಳ ಪರಿಷ್ಕರಣೆ ಮತ್ತು ಇತರ ಸಂಬಂಧಿತ ವಿಚಾರಗಳ ಬಗ್ಗೆ ಆದೇಶವನ್ನು ಹೊರಡಿಸಿದ್ದು, ಈ ಆದೇಶದಲ್ಲಿ ಇತರ ಅಂಶಗಳ ಜೊತೆಗೆ ವಿವಿಧ ನಿವೃತ್ತಿ ಮತ್ತು ಮರಣ ಸೌಲಭ್ಯ ಮತ್ತು ಕುಟುಂಬ ಪಿಂಚಣಿಗಳನ್ನು ಲೆಕ್ಕ ಹಾಕುವುದಕ್ಕಾಗಿ ಉಪಲಬ್ದ ಪದಕ್ಕೆ ಸರ್ಕಾರಿ ನೌಕರನು ತನ್ನ ನಿವೃತ್ತಿ / ಮರಣ ಸಮಯದಲ್ಲಿ ಹೊಂದಿದ ಹುದ್ದೆಗೆ ಅನ್ವಯಿಸಲಾದ ವೇತನ ಶ್ರೇಣಿಯ ಮೂಲ ವೇತನ ಎಂದು ಅರ್ಥೈಯಿಸಬೇಕೆಂದು ಆದೇಶಿಸಲಾಗಿದೆ. ಈ ಆದೇಶವು ದಿನಾಂಕ:01.07.2005 ರಿಂದಲೇ ಜಾರಿಗೆ ಬರುತ್ತದೆ.

ನಿವೃತ್ತಿ ವೇತನ ಗಳಿಸಲು ಅಗತ್ಯವಿರುವ ಕನಿಷ್ಠ ಅರ್ಹತಾದಾಯಕ ಸೇವೆಯನ್ನು 15 ವರ್ಷಗಳಿಂದ 10 ವರ್ಷಗಳಿಗೆ ಇಳಿಸಿರುವ ಸೌಲಭ್ಯವು ದಿನಾಂಕ:01.09.2003 ರಿಂದ 08.09.2006 ರ ಅವಧಿಯಲ್ಲಿ ನಿವೃತ್ತರಾದವರಿಗೆ ಲಭ್ಯವಾಗುವುದಿಲ್ಲ. ಹಾಗೆಯೇ ವಿವಿಧ ನಿವೃತ್ತಿ ಸೌಲಭ್ಯಗಳನ್ನು ಲೆಕ್ಕ ಹಾಕಲು ಅಂತಿಮ ವೇತನವನ್ನು ಉಪಲಬ್ದಿಯೆಂದು ಪರಿಗಣಿಸಬೇಕೆಂಬ ಸೂತ್ರವು ದಿನಾಂಕ:01.09.2003 ರಿಂದ 30.06.2005 ರ ನಡುವೆ ನಿವೃತ್ತರಾದವರಿಗೆ ಅನ್ವಯಿಸುವುದಿಲ್ಲ. ಈ ಸೌಲಭ್ಯಗಳಿಂದ ವಂಚಿತರಾದವರಿಗೂ ಸೌಲಭ್ಯಗಳನ್ನು ವಿಸ್ತರಿಸಬೇಕೆಂದು ಬಂದ ಮನವಿಗಳ ಹಿನ್ನೆಲೆಯಲ್ಲಿ ಹಾಗೂ ಏಕ ರೂಪತೆಯನ್ನು ಕಾಯ್ದುಕೊಳ್ಳಬೇಕು ಎಂಬ ದೃಷ್ಠಿಯಿಂದ ಈ ಸೌಲಭ್ಯಗಳನ್ನು ದಿನಾಂಕ:01.09.2003 ರಿಂದ ಅನ್ವಯವಾಗುವಂತೆ ಪೂರ್ವಸ್ಥಿತಿಗೆ ತರುವ ಅಗತ್ಯತೆಯನ್ನು ಪರಿಗಣಿಸಿ ಕೆಳಕಂಡ ಆದೇಶಗಳನ್ನು ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 06 ಎಸ್‌ಆರ್‌ಎ 2003,**
**ಬೆಂಗಳೂರು, ದಿನಾಂಕ: 22ನೇ ಅಕ್ಟೋಬರ್ 2007**

ನಿವೃತ್ತಿ ಸೌಲಭ್ಯವನ್ನು ಪಡೆಯಲು ಅಗತ್ಯವಿರುವ ಕನಿಷ್ಠ ಅರ್ಹತಾದಾಯಕ ಸೇವೆಯ ನಿಬಂಧನೆಯನ್ನು 15 ವರ್ಷಗಳಿಂದ 10 ವರ್ಷಗಳಿಗೆ ಮತ್ತು ನಿವೃತ್ತಿ ವೇತನ ಹಾಗೂ ಪಿಂಚಣಿ ಸೌಲಭ್ಯಗಳನ್ನು ಲೆಕ್ಕ ಹಾಕಲು ಸರ್ಕಾರಿ ನೌಕರನ ನಿವೃತ್ತಿ/ಮರಣದ ನಿಕಟ ಪೂರ್ವದ 10 ತಿಂಗಳ ಸರಾಸರಿ ವೇತನವನ್ನು ಉಪಲಬ್ಧಿಯೆಂದು ಪರಿಗಣಿಸುವ ಬದಲಿಗೆ ಹಿಂದೆ ಜಾರಿಯಲ್ಲಿದ್ದ ಪದ್ದತಿಯಂತೆ ನೌಕರನು ತನ್ನ ನಿವೃತ್ತಿ/ಮರಣದ ಸಮಯದಲ್ಲಿ

ಹೊಂದಿದ್ದ ಹುದ್ದೆಗೆ ಅನ್ವಯಿಸಲಾದ ವೇತನ ಶ್ರೇಣಿಯ ಮೂಲ ವೇತನವನ್ನು ಉಪಲಬ್ಧಿಯೆಂದು ಪರಿಗಣಿಸುವ ಸೂತ್ರವನ್ನು, ದಿನಾಂಕ 01.09.2003 ರಿಂದ ಅನ್ವಯವಾಗುವಂತೆ ಕಾಲ್ಪನಿಕವಾಗಿ ಪೂರ್ವ ಸ್ಥಿತಿಗೆ ತರಲಾಗಿದೆ (restored notionally).

ಈ ಕಾರಣದಿಂದ ಲಭ್ಯವಾಗುವ ಆರ್ಥಿಕ ಸೌಲಭ್ಯಗಳು ಈ ಆದೇಶ ಹೊರಡಿಸಿದ ದಿನಾಂಕದಿಂದ ಮಾತ್ರ ಲಭ್ಯವಾಗುವುದು.

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು ಮತ್ತು ಕರ್ನಾಟಕ ಸರ್ಕಾರಿ ನೌಕರರ (ಕುಟುಂಬ ನಿವೃತ್ತಿ ವೇತನ) ನಿಯಮಗಳು, 2002 ಗಳಿಗೆ ಸೂಕ್ತ ತಿದ್ದುಪಡಿ ತರಲಾಗುವುದು.

ಭಾರತದ ರಾಷ್ಟ್ರಪತಿಗಳ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
ಸಹಿ/-
(ಕೆ.ಎಸ್.ಗೋಪಾಲಕೃಷ್ಣ)
ಸರ್ಕಾರದ ಉಪಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-1)

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು,
3. ಇಲಾಖಾ ಮುಖ್ಯಾಧಿಕಾರಿಗಳು,
4. ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
7. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
9. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.

14. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ / ಜಿಲ್ಲಾ ಖಜಾನೆಗಳು.
15. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
16. ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 500 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.
17. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
18. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
19. ವಾರಪತ್ರ.
20. ಶಾಖೆಯ ರಕ್ಷಾ ಕಡತ.

[ಕ್ರಮ ಸಂಖ್ಯೆ: 9 ರಿಂದ 13 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ.]